ಮಾಗಡಿ ತಾಲ್ಲೂಕು ಅಗಲಕೋಟೆ ರಸ್ತೆ ಬಗ್ಗೆ

702ಎ - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಗಡಿ ತಾಲ್ಲೂಕು ಅಗಲಕೋಟೆ ಕೋಟಗಾನಹಳ್ಳಿ ಮಧ್ಯೆ ರಸ್ತೆ ಹದಗಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮ ಏನು?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ

ಆ) ಸುಗಮ ಸಂಚಾರಕ್ಕೆ ತೊಂದರೆ ಆಗದಂತೆ ರಸ್ತೆಯನ್ನು ಸುಸ್ಥಿತಿಯನ್ನಡುವಂತೆ ಸರ್ಕಾರದಿಂದ ಸೂಚನೆಯನ್ನು ಮುಖ್ಯ ಇಂಜಿನಿಯರ್‌ರವರಿಗೆ ನೀಡಲಾಗಿದೆ.

ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ವಿದ್ಯುತ್ ಕುರಿತು

19 - ಶ್ರೀ ಎನ್. ಬಸವಯ್ಯ (ಚಿಕ್ಕನಾಯಕನ ಹಳ್ಳಿ) : ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಇಲ್ಲಿಯವರೆಗೆ ಎಷ್ಟು ಹಳ್ಳಿಗಳಲ್ಲಿ ಹಾಗೂ ಹ್ಯಾಮ್ಲೆಟ್ ಹಳ್ಳಿಗಳಲ್ಲಿ ವಿದ್ಯುತ್ ಇರುತ್ತದೆ, ಇಲ್ಲದಿರುವ ಗ್ರಾಮಗಳಲ್ಲಿ ವಿದ್ಯುತ್ ಅಳವಡಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಜೆ.ಹೆಚ್. ಪಟೇಲ್ (ಉಪ ಮುಖ್ಯಮಂತ್ರಿಗಳು) :

ಅ) 1981ರ ಜನಗಣತಿ ಪ್ರಕಾರ ಚಿಕ್ಕನಾಯಕನ ಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಜನವಸತಿ ಇರುವ ಎಲ್ಲಾ 234 ಕಂದಾಯ ಗ್ರಾಮಗಳನ್ನು ಈಗಾಗಲೇ ವಿದ್ಯುದ್ಧೀಕರಿಸಲಾಗಿದೆ.

ಈ ವಿಧಾನ ಸಭಾ ಕ್ಷೇತ್ರಗಳಲ್ಲಿ 145 ಹ್ಯಾಮ್ಲೆಟ್ (ಉಪ ಗ್ರಾಮ)ಗಳಿದ್ದು, ಇವುಗಳ ಪೈಕಿ ಜನವರಿ 96ರ ಅಂತ್ಯದವರೆಗೆ ಒಟ್ಟು 86 ಉಪ ಗ್ರಾಮಗಳನ್ನು ವಿದ್ಯುದ್ದೀಕರಿಸಲಾಗಿದೆ. ವಿದ್ಯುದ್ಧೀಕರಣಕ್ಕಾಗಿ ಬಾಕಿ ಉಳಿಸಿರುವ 59 ಉಪ ಗ್ರಾಮಗಳನ್ನು ಮಂಡಳಿಗೆ ಲಭ್ಯವಿರುವ ಆರ್ಥಿಕ ಸಂಪನ್ಮೂಲಕ್ಕನುಗುಣವಾಗಿ ವಿದ್ಯುದ್ಧೀಕರಣ ಮಾಡಲು ಕ್ರಮ ಕೈಗೊಳ್ಳಲಗುವುದು.

ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ

16 - ಶ್ರೀ ಎನ್. ಬಸವಯ್ಯ (ಚಿಕ್ಕನಾಯಕನ ಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಮಳೆ ಕಡಿಮೆಯಾಗಿರುವುದರಿಂದ ಕೆರೆ ಕಟ್ಟೆಗಳಲ್ಲಿ ನೀರಿಲ್ಲದೆ ಅನೇಕ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಚಿಕ್ಕ ನಾಯಕನಹಳ್ಳಿ ತಾಲ್ಲೂಕಿಗೆ ಆದಷ್ಟು ಬೇಗನೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದೆ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಚಿಕ್ಕನಾಯಕನಹಳ್ಳಿ ಗ್ರಾಮಗಳಿಗೆ ಕುಡಿಯುವ ನೀರನ್ನು 23 ಕೊಳವೆ ನೀರು ಸರಬರಾಜು ಕಿರು ನೀರು ಸರಬರಾಜು ಯೋಜನೆ ಮತ್ತು 933 ಕೈಪಂಪು ಕೊಳವೆ ಬಾವಿಗಳ ಮೂಲಕ ಸರಬರಾಜು ಮಾಡಲಾಗುತ್ತದೆ. ಕುಡಿಯುವ ನೀರು ಸರಬರಾಜನ್ನು ಉತ್ತಮ ಗೊಳಿಸಲು 28 ಕೊಳವೆ ನೀರು ಸರಬರಾಜು ಯೋಜನೆ, 45 ಕಿರು ನೀರು